ನೆಲಮಂಗಲ ಮುನ್ಸೀಫ್ ಕೋರ್ಟಿನ ಬಗ್ಗೆ.

1531. ಶ್ರೀ ಆಂಜನಮೂರ್ತಿ (ನೆಲಮಂಗಲ) : ಮಾನ್ಯ ಕಾನೂನು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ನೆಲಮಂಗಲ ಟೌನ್‌ನಲ್ಲಿರುವ ಮುನ್ಸೀಫ್ ಮ್ಯಾಜಿಸ್ಟ್ರೇಟ್ ನ್ಯಾಯಾಲಯವು ಒಂದು ಸಣ್ಣ ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ತನ್ನದೇ ಆದ ಸ್ವಂತ ಕಟ್ಟಡದ ನಿರ್ಮಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ ;

ಇ) ಕಕ್ಷಿದಾರರ ಹಾಗೂ ನ್ಯಾಯಾಲಯದ ಅಧಿಕಾರಿಗಳ ಹಿತದೃಷ್ಟಿಯಿಂದ ಕಟ್ಟಡ ನಿರ್ಮಿಸಲು ಸರ್ಕಾರ ಕಾಲ ಗೊತ್ತುಪಡಿಸುವುದೇ ?

ಶ್ರೀ ಬ್ಲೇಸಿಯಸ್ ಎಂ. ಡಿಸೋಜ (ಕಾನೂನು ಸಚಿವರು) :

ಅ) ಹೌದು.

ಆ) ಸ್ವಂತ ಕಟ್ಟಡ ಹೊಂದಲು ಸರ್ಕಾರವು ನೆಲಮಂಗಲ ಸರ್ವೆ ನಂ. 214 ರಿಂದ 215:5 ರಲ್ಲಿರುವ 5 ಎಕರೆ 10 ಗುಂಟೆ ಪ್ರದೇಶವನ್ನು ಭೂ ಸ್ವಾಧೀನಗೊಳಿಸಲು ಕ್ರಮ ತೆಗೆದುಕೊಳ್ಳಲಾಗಿದೆ.

ಇ) ಕಟ್ಟಡದ ಕಾರ್ಯವನ್ನು ದೊರೆಯುವ ಸಂಪನ್ಮೂಲಗಳನ್ನು ಆಧರಿಸಿ, ಶೀಘ್ರವಾಗಿ ಕ್ರಮ ಕೈಗೊಳ್ಳಲಾಗುವುದು.

ನೆಲಮಂಗಲ ಮತಕ್ಷೇತ್ರಕ್ಕೆ ವಿದ್ಯುತ್‌ನಿಂದಾಗುವ ತೊಂದರೆ ಬಗ್ಗೆ.

1532. ಶ್ರೀ ಆಂಜನಮೂರ್ತಿ (ನೆಲಮಂಗಲ) : ಮಾನ್ಯ ಇಂಧನ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ನೆಲಮಂಗಲ ಮತ ಕ್ಷೇತ್ರದಲ್ಲಿ ಕಡಿಮೆ ವಿದ್ಯುತ್ ವೋಲ್ಟೇಜ್‌ನಿಂದಾಗಿ ರೈತರಿಗೆ, ಕಾರ್ಮಿಕರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ ಸರ್ಕಾರದ ಈ ಕ್ಷೇತ್ರದ ಜನರ ಹಿತದೃಷ್ಟಿಯಿಂದ ಹಾಗೂ ಈಗೀಗ ಹೆಚ್ಚಿನ ಕೈಗಾರಿಕೆಗಳು ಪ್ರಾರಂಭವಾಗುತ್ತಿರುವುದರಿಂದ 25 ಮೆಗವಾಟ್ಸ್ ಟ್ರಾನ್ಸ್‌ಫಾರ್ಮರ್‌ನ್ನು ಒದಗಿಸಲು ಕ್ರಮ ಕೈಗೊಳ್ಳುವುದೇ ?

ಶ್ರೀ ಎಂ. ರಾಮಪ್ಪ (ಇಂಧನ ರಾಜ್ಯ ಮಂತ್ರಿಗಳು) :

ಅ) ಬಂದಿದೆ.

ಆ) ನೆಲಮಂಗಲದಲ್ಲಿರುವ ಉಪ ವಿದ್ಯುತ್ ಕೇಂದ್ರದಲ್ಲಿ ಹೆಚ್ಚುವರಿ ಸಾಮರ್ಥ್ಯದ ಟ್ರಾನ್ಸ್‌ಫಾರ್ಮರ್‌ಗಳನ್ನು ಸ್ಥಾಪಿಸುವ ಅವಶ್ಯಕತೆ ಸದ್ಯಕ್ಕಿಲ್ಲ. ದಾಬಸ್‌ಪೇಟೆಯಲ್ಲಿ